ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 19–10–2021

# ಮಾಧ್ಯಮ ಆಹ್ವಾನ

**MEDIA INVITATION**

ದಿನಾಂಕ: 20–10–2021

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ – ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಸಮಾರಂಭ

ಉದ್ಘಾಟನೆ:
ಬಸವರಾಜ ಎಸ್ ಬೊಮ್ಮಾಯಿ,
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಪುಷ್ಪಾರ್ಚನೆ,
ಬಿ. ಶ್ರೀರಾಮುಲು,
ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವರು

ಅಧ್ಯಕ್ಷತೆ
ರಿಜ್ವಾನ್ ಅರ್ಷದ್,
ಶಿವಾಜಿನಗರದ ವಿಧಾನಸಭಾ ಕ್ಷೇತ್ರದ ಶಾಸಕರು.

ದಿನಾಂಕ: 20–10–2021, ಬುಧವಾರ,

ಸಮಯ / ಸ್ಥಳ : 1. ಬೆಳಿಗ್ಗೆ 10–00 ಗಂಟೆಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ – ಶ್ರೀ ಮಹರ್ಷಿ ವಾಲ್ಮೀಕಿ ತಪೋವನ, ಶಾಸಕರ ಭವನದ ಮುಂಭಾಗ, ಬೆಂಗಳೂರು
2. ಬೆಳಿಗ್ಗೆ 10.30 ಗಂಟೆಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರಧಾನ ಸಮಾರಂಭ – ಬ್ಯಾಂಕ್ವೆಟ್ ಸಭಾಂಗಣ, ವಿಧಾನಸೌಧ, ಬೆಂಗಳೂರು.

**21-10-2021**

**ಪೊಲೀಸ್ ಸಂಸ್ಮರಣ ದಿನಾಚರಣೆ**

**ಮುಖ್ಯ ಅತಿಥಿಗಳು**

**ಬಸವರಾಜ ಎಸ್ ಬೊಮ್ಮಾಯಿ,**
**ಮುಖ್ಯಮಂತ್ರಿಗಳು,ಕರ್ನಾಟಕ ಸರ್ಕಾರ,**

**ಅಧ್ಯಕ್ಷತೆ:**
**ಆರಗ ಜ್ಞಾನೇಂದ್ರ,**
**ಮಾನ್ಯ ಗೃಹ ಸಚಿವರು, ಕರ್ನಾಟಕ ಸರ್ಕಾರ.**

**ದಿನಾಂಕ: 21-10-2021, ಗುರುವಾರ, ಬೆಳಿಗ್ಗೆ 8-00 ಗಂಟೆಗೆ**

**ಸ್ಥಳ: ಕೇಂದ್ರ ಸ್ಥಾನದ ಹುತಾತ್ಮರ ಉದ್ಯಾನವನ, ನಗರ ಸಶಸ್ತ್ರ ಮೀಸಲು ಪಡೆ, ಮೈಸೂರು ರಸ್ತೆ, ಬೆಂಗಳೂರು**

**ಸೂಚನೆ: ಮಾಧ್ಯಮದವರಿಗಾಗಿ ಪೊಲೀಸ್ ಪ್ರಧಾನ ಕಛೇರಿ ಮತ್ತು ಪೊಲೀಸ್ ಆಯುಕ್ತರ ಕಛೇರಿ ಬೆಂಗಳೂರು ನಗರ ಇಲ್ಲಿ ವಾಹನ ವ್ಯವಸ್ಥೆ ಮಾಡಲಾಗಿದೆ. ವಾಹನವು ಬೆಳಿಗ್ಗೆ 7.15 ಗಂಟೆಗೆ ಸದರಿ ಸ್ಥಳದಿಂದ ಹೊರಡುವುದು.**

**ಹೆಚ್ಚಿನ ಮಾಹಿತಿಗಾಗಿ: ಬಿ.ಎನ್. ನರಸಿಂಹಮೂರ್ತಿ, ಸಾರ್ವಜನಿಕ ಸಂಪರ್ಕಾಧಿಕಾರಿ, ದೂರವಾಣಿ ಸಂ. 9480800728 ಅಥವಾ 080-22943045 ಇವರನ್ನು ಸಂಪರ್ಕಿಸುವುದು**

# ಪತ್ರಿಕಾ ಪ್ರಕಟಣೆ

**PRESS RELEASE**

### ಅಕ್ಟೋಬರ್ 24ರಿಂದ ಒಂದು ವಾರಗಳ ಕಾಲ 'ಕನ್ನಡಕ್ಕಾಗಿ ನಾವು' ಅಭಿಯಾನ – ಸಚಿವ ಸುನೀಲ್ ಕುಮಾರ್

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ):

ರಾಜ್ಯಾದಾದ್ಯಂತ 66ನೆ ಕನ್ನಡ ರಾಜ್ಯೋತ್ಸವವನ್ನು ವಿಶಿಷ್ಟವಾಗಿ ಆಚರಿಸಲು ನಿರ್ಧರಿಸಲಾಗಿದೆ. ಎಂದಿನಂತೆ ನವೆಂಬರ್ ಒಂದರಂದು ಮಾತ್ರ ರಾಜ್ಯೋತ್ಸವ ಆಚರಿಸದೇ, ಈ ಬಾರಿ ಅಕ್ಟೋಬರ್ 24ರಿಂದ ಅಕ್ಟೋಬರ್ 30ರವರೆಗೆ "ಕನ್ನಡಕ್ಕಾಗಿ ನಾವು" ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯಾದಾದ್ಯಂತ ನಡೆಯುವ ಈ ಕಾರ್ಯಕ್ರಮಕ್ಕೆ ಪ್ರತ್ಯೇಕ ಲಾಂಛನವನ್ನು ರೂಪಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಇಂಧನ ಇಲಾಖಾ ಸಚಿವ ವಿ. ಸುನೀಲ್ ಕುಮಾರ್ ಅವರು ತಿಳಿಸಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಸಚಿವರು "ಕನ್ನಡಕ್ಕಾಗಿ ನಾವು" ಅಭಿಯಾನದ ಸಂದರ್ಭದಲ್ಲಿ ಎಲ್ಲರೂ ಕನ್ನಡದಲ್ಲೇ ಮಾತಡುವುದು. ಕನ್ನಡದಲ್ಲೇ ವ್ಯವಹರಿಸುವುದು, ಸಾಮಾಜಿಕ

ಜಾಲತಾಣಗಳಲ್ಲಿ ಎಲ್ಲರೂ ಕನ್ನಡವನ್ನೇ ಬಳಸುವುದು, ಕನ್ನಡೇತರರಿಗೆ ಕನ್ನಡ ಕಲಿಸುವುದು, ಕನ್ನಡದಲ್ಲೇ ಸಹಿ ಮಾಡುವುದು, ಚರವಾಣಿಯ ಸಂದೇಶಗಳನ್ನು ಕನ್ನಡದಲ್ಲಿಯೇ ಕಳುಹಿಸುವುದು, ಐಟಿ-ಬಿಟಿ ಕಂಪೆನಿಗಳಲ್ಲಿ ಕನ್ನಡದಲ್ಲಿಯೇ ಮಾತನಾಡುವುದು ಹಾಗೂ ಎಲ್ಲಾ ಮಾಧ್ಯಮಗಳಲ್ಲಿಯೂ ಸರಿಗನ್ನಡವನ್ನೇ ಬಳಸುವ ಮೂಲಕ ಕನ್ನಡ ಹಬ್ಬದ ವಾತಾವರಣವನ್ನು ಸೃಷ್ಟಿಸೋಣ ಎಂದರು.

ನಾಡಿನ ಎಲ್ಲರೂ ಕನ್ನಡವನ್ನು ಬಳಸುವುದು, ಪ್ರತಿಯೊಬ್ಬರಲ್ಲೂ ಕನ್ನಡ ಭಾಷೆಯ ಮಹತ್ವವನ್ನು ತಿಳಿಸುವುದರ ಜೊತೆ ಅನ್ಯ ಭಾಷೆಯ ಪದಗಳನ್ನು ಬಳಸದೇ ಕನ್ನಡದಲ್ಲಿ ಮಾತನಾಡಲು ಪೂರಕ ವಾತಾವರಣ ನಿರ್ಮಿಸುವುದು, ಒಂದು ವಾರ ಕಾಲ ಸಂಪೂರ್ಣ ಕನ್ನಡಮಯ ವಾತಾವರಣ ಸೃಷ್ಟಿಸುವ ಮೂಲಕ "ಕನ್ನಡಕ್ಕಾಗಿ ನಾವು" ಅಭಿಯಾನ ನಡೆಸಲಾಗುತ್ತಿದೆ.ಅಭಿಯಾನದ ಹಿನ್ನಲೆಯಲ್ಲಿ ಲಾಂಛನ, ಕನ್ನಡದ ಹಿರಿಯ ಸಾಧಕರ ನುಡಿಗಳನ್ನು ಒಳಗೊಂಡ ಪ್ರೊಮೊ ಬಳಸುವ ಮೂಲಕ ಕನ್ನಡಪರ ವಾತಾವರಣವನ್ನು ನಾಡಿನಾದ್ಯಂತ ಮೂಡಿಸಲಾಗುತ್ತಿದೆ.

ರಾಜ್ಯದ ಐದು ರಂಗಾಯಣಗಳು ಹಾಗೂ ವಿವಿಧ ಅಕಾಡೆಮಿಗಳು ಮತ್ತು ಪ್ರಾಧಿಕಾರಗಳ ಸಹಯೋಗದಲ್ಲಿ ರಾಜ್ಯದ ಆಯ್ದ ಸಾರ್ವಜನಿಕ ಸ್ಥಳಗಳಲ್ಲಿ ಕನ್ನಡ ನಾಡು, ನುಡಿ, ಸಂಸ್ಕೃತಿ ಮತ್ತು ಕರ್ನಾಟಕದ ಹಿರಿಮೆ ಬಿಂಬಿಸುವ ನಾಟಕಗಳು, ನೃತ್ಯ, ಸಂಗೀತ ಕಾರ್ಯಕ್ರಮಗಳನ್ನು ಒಳಗೊಂಡ "ಕನ್ನಡ ಸಾಂಸ್ಕೃತಿ ಉತ್ಸವ" ಆಯೋಜಿಸಲಾಗಿದೆ. ಈ ಉತ್ಸವದಲ್ಲಿ ಬೆಂಗಳೂರು ಎಲ್ಲ ವಾರ್ಡ್‌ಗಳಲ್ಲಿ ಐಟಿಬಿಟಿ ಸಂಸ್ಥೆಗಳ ಆವರಣಗಳಲ್ಲಿ, ಮೆಟ್ರೋ, ವಿಧಾನಸೌಧ, ವಿವಿಧ ಕಾರ್ಖಾನೆಗಳ ಆವರಣದಲ್ಲಿ ಇದೇ ತೆರನಾದ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಮದು ತಿಳಿಸಿದರು.

ರಾಜ್ಯಾದಾದ್ಯಂತ ಅಕ್ಟೋಬರ್ 28 ರಂದು ಬೆಳಗ್ಗೆ 11 ಗಂಟೆಗೆ ಒಂದು ಲಕ್ಷ ಕಂಠಗಳಲ್ಲಿ ಕನ್ನಡದ ಮೂರು ಗೀತೆಗಳ ಗಾಯನ ನಡೆಯಲಿದೆ. ಇದಕ್ಕೆ ಈಗಾಗಲೇ 3 ಕನ್ನಡದ ಗೀತೆಗಳನ್ನು ಆಯ್ಕೆ ಮಾಡಿಕೊಳ್ಳಾಗಿದೆ. ರಾಷ್ಟ್ರಕವಿ ಕುವೆಂಪು ರಚಿತ "ಬಾರಿಸು ಕನ್ನಡ ಡಿಂಡಿಮವ", ಕೆ.ಎಸ್.ನಿಸಾರ್ ಅಹಮದ್ ರಚಿತ "ಜೋಗದ ಸಿರಿ ಬೆಳಕಿನಲ್ಲಿ", ಹಂಸಲೇಖಾ ರಚನೆಯ "ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು" ಎಂಬ ಗೀತೆಗಳು ಎಲ್ಲಾ ಸರ್ಕಾರಿ ಕಚೇರಿಗಳು, ಶಾಲೆ-ಕಾಲೇಜುಗಳು, ವಿಶ್ವವಿದ್ಯಾಲಯಗಳು, ಜಿಲ್ಲೆ, ತಾಲೂಕು, ಗ್ರಾಮ ಮಟ್ಟದಲ್ಲಿ ಮತ್ತು ಗಡಿನಾಡು, ಹೊರನಾಡುಗಳಲ್ಲಿ ಏಕಕಾಲದಲ್ಲಿ ಈ ಮೂರು ಹಾಡುಗಳ ಗಾಯನ ಕಾರ್ಯಕ್ರಮ ನಡೆಯಲಿದೆ. ವಿಧಾನಸೌಧದ ಮೆಟ್ಟಿಲ ಬಳಿ ವಿಧಾನಸೌಧ ಸಿಬ್ಬಂದಿಗಳಿಂದ, ಗಾಂಧಿ ಪ್ರತಿಮೆ ಬಳಿ ಅಧಿಕಾರಿ ವೃಂದದಿಂದ ಗೀತ ಗಾಯನ ನಡೆಯಲಿದೆ ಎಂದು ಸಚಿವರು ತಿಳಿಸಿದರು.

ಕನ್ನಡದಲ್ಲಿ ಮಾತು ಮತ್ತು ಬರವಣಿಗೆ ಕಾರ್ಯಕ್ರಮವು ಕನ್ನಡ ಭಾಷೆಯನ್ನು ಬೆಳೆಸುವ ಹಿನ್ನಲೆಯಲ್ಲಿ ಕಡ್ಡಾಯವಾಗಿ ಎಲ್ಲೆಡೆಯೂ ಕನ್ನಡ ಬಳಸುವಂತೆ ಚರವಾಣಿ (ಮೊಬೈಲ್)ಯಲ್ಲಿ ಕನ್ನಡ ಭಾಷೆಯಲ್ಲೇ ಸಂದೇಶ ಕಳುಹಿಸುವಂತೆ, ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿಯೂ ಕನ್ನಡವನ್ನೇ ಬಳಸುವಂತೆ ಪ್ರೇರೇಪಿಸುವುದು.

ಕನ್ನಡದಲ್ಲಿ ಮಾತನಾಡುವ ಸ್ಪರ್ಧೆಯಲ್ಲಿ ಒಂದೂ ಅನ್ಯ ಭಾಷೆಯ ಪದಗಳನ್ನು ಬಳಸದೇ ನಿರರ್ಗಳವಾಗಿ ಕನ್ನಡದಲ್ಲಿ ನಾಲ್ಕು ನಿಮಿಷಗಳ ಕಾಲ ಕನ್ನಡ ನಾಡು, ನುಡಿ, ಪರಂಪರೆಗೆ ಸಂಬಂಧಿಸಿದ ವಿಷಯಗಳ ಕುರಿತು ವಿಡಿಯೋ-ಸೆಲ್ಫಿ ತೆಗೆದು ಕಳುಹಿಸುವುದು. ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಮೂವರಿಗೆ ಪ್ರಥಮ ರೂ. 5,000/-, ದ್ವಿತೀಯ ರೂ. 3,000/- ತೃತೀಯ ರೂ.2,000/- ಬಹುಮಾನ ನೀಡಲಾಗುವುದು. ಜಿಲ್ಲಾ ಮಟ್ಟದಲ್ಲಿ ವಿಜೇತರಾದವರನ್ನು ರಾಜ್ಯಮಟ್ಟದಲ್ಲಿ ಮತ್ತೆ ಸ್ಪರ್ಧೆ ನಡೆಸಲಾಗುವುದು. ರಾಜ್ಯಮಟ್ಟದಲ್ಲಿ ಪ್ರಥಮ ಬಹುಮಾನ ರೂ. 50,000/- ದ್ವಿತೀಯ ಬಹುಮಾನ ರೂ. 30,000/- ಮತ್ತು ತೃತೀಯ ಬಹುಮಾನ ರೂ. 20,000/- ನೀಡಲಾಗುವುದು. ಅಕ್ಟೋಬರ್ 28ರೊಳಗೆ ವಿಡಿಯೋ-ಸೆಲ್ಫಿ ತೆಗೆದು ಕಳುಹಿಸುವುದು. ಅಕ್ಟೋಬರ್ 30 ರಂದು ರಾಜ್ಯಮಟ್ಟದ ಸ್ಪರ್ಧೆ ನಡೆಯಲಿದೆ.

ರಾಜ್ಯದ ಗಡಿಭಾಗಗಳಾದ ಮಹಾರಾಷ್ಟ್ರ, ಕೇರಳ, ತಮಿಳುನಾಡು, ಆಂಧ್ರಪ್ರದೇಶ ಮತ್ತು ಗೋವಾ ರಾಜ್ಯಗಳಿಗೆ ಹೊಂದಿಕೊಂಡಿರುವ ಗಡಿಭಾಗದ ತಾಲೂಕು ಪ್ರದೇಶಗಳಲ್ಲಿ ನಾಡಿನ ಸಂಸ್ಕೃತಿ, ಭಾಷೆ, ಸಾಹಿತ್ಯ ಕುರಿತ ಜಾಗೃತಿ ಕಾರ್ಯಕ್ರಮಗಳ ನಡೆಸುವ ಮೂಲಕ 'ಕನ್ನಡಕ್ಕಾಗಿ ನಾವು" ಅಭಿಯನ ನಡೆಸಲಾಗುವುದು.

ಬೆಂಗಳೂರಿನ ರವೀಚಿದ್ರ ಕಲಾಕ್ಷೇತ್ರದಲ್ಲಿ "ಕರ್ನಾಟಕ ಸಾಂಸ್ಕೃತಿಕ ಉತ್ಸವ" ವನ್ನು 29ನೇ ಅಕ್ಟೋಬರ್ 2021ರಿಂದ 31ನೇ ಅಕ್ಟೋಬರ್ 2021ರವರೆಗೆ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ. ಪುಸ್ತಕೋತ್ಸವ, ದೇಶೀಯ ಉಡುಪು ಮತ್ತು ಆಹಾರ ಮೇಳ, ಚಿತ್ರಕಲೆ/ಶಿಲ್ಪ ಕಲಾ ಮೇಳಗಳನ್ನು ಆಯೋಜಿಸಲಾಗುವುದು. ಜೊತೆಗೆ ಗೀತಗಾಯನ, ನೃತ್ಯರೂಪಕ, ಯಕ್ಷಗಾನ, ವಿಚಾರ ಸಂಕಿರಣ, ಶಾಸ್ತ್ರೀಯ ನೃತ್ಯ, ಕಾವ್ಯ–ಕುಂದ–ಗಾಯನ, ನಾಟಕ, ಸುಗಮಸಂಗೀತ, ವಾದ್ಯ ಸಂಗೀತ, ಜಾನಪದ ನೃತ್ಯ, ಇತರ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಲಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಗಡಿ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಡಾ.ಸಿ. ಸೋಮಶೇಖರ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ, ಹಲವು ಗಣ್ಯರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

**2021ನೇ ಸಾಲಿನ ಶ್ರೀಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರಕಟ – ಸಚಿವ ಬಿ. ಶ್ರೀರಾಮುಲು**

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ):

2021ನೇ ಸಾಲಿನ ಶ್ರೀಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆರು ಜನ ಸಾಧಕರನ್ನು ಆಯ್ಕೆ ಮಾಡಲಾಗಿದೆ. ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆಯಾದ ಸಾಧಕರಿಗೆ ಪ್ರಶಸ್ತಿ ಫಲಕ, 20 ಗ್ರಾಂ ಚಿನ್ನದ ಪದಕ ಹಾಗೂ 5 ಲಕ್ಷ ನಗದು ಮೊತ್ತವನ್ನು ನೀಡಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಸಾರಿಗೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಬಿ. ಶ್ರೀರಾಮುಲು ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಲ್. ಗೋಮತಿದೇವಿ ಅವರ ನೇತೃತ್ವದ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಆಯ್ಕೆ ಸಮಿತಿಯು 2021 ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಹ ಆರು ಜನ ಸಾಧಕರನ್ನು ಆಯ್ಕೆ ಮಾಡಿದೆ.

2021ನೇ ಸಾಲಿನ ಶ್ರೀ ವಾಲ್ಮೀಕಿ ಪ್ರಶಸ್ತಿಗೆ ಬೆಂಗಳೂರು ವಿಭಾಗದಿಂದ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕು ಕಸಾಪುರ ವಾಸಿಯಾದ ಕೆ.ಸಿ. ನಾಗರಾಜು ಅವರು ಸಾಮಾಜಿಕ ಕ್ಷೇತ್ರದಲ್ಲಿ ಅಯ್ಕೆಯಾಗಿದ್ದು, ಸದರಿ ಸಾಧಕರು ಸುಮಾರು 30–40 ವರ್ಷಗಳಿಂದ ಸಾರ್ವಜನಿಕ ಜೀವನದಲ್ಲಿದ್ದು ಹಲವಾರು ಸಂಘ ಸಂಸ್ಥೆಗಳ ಮುಖೇನ ಜನಪರ ಕಾರ್ಯಕ್ರಮಗಳಲ್ಲಿ ಹಾಗೂ ಹೋರಾಟಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಬೆಳಗಾವಿ ವಿಭಾಗದಿಂದ ಲಕ್ಷ್ಮಿಗಣಪತಿ ಸಿದ್ದಿ ಅವರು ಇತರೆ ಕ್ಷೇತ್ರದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬಹುತೇಕ ಸಿದ್ದಿ ಜನರು ಅರಣ್ಯ ಪ್ರದೇಶದಲ್ಲಿ ವಾಸಿಸ್ಮತ್ತಿರುವುದರಿಂದ ಪಟ್ಟಣದ ಸಂಪರ್ಕ ಸೌಲಭ್ಯಗಳ ಕೊರತೆ ಹಿನ್ನಲೆಯಲ್ಲಿ ಮಳೆಗಾಲದಲ್ಲಿ ಸಿದ್ದಿ ಜನಾಂಗದವರು ವಾಸಿಸುವ ಪ್ರದೇಶಗಳಿಗೆ ವಾಹನ ಹೋಗುವುದು ಅಸಾಧ್ಯವಾಗಿತ್ತು. ಸದರಿ ಸಾಧಕರು ಕಳೆದ 35 ವರ್ಷಗಳಿಂದ ನಾಟಿ ವೈದ್ಯೆಯಾಗಿ ಯಾವುದೇ ಫಲಾಪೇಕ್ಷೆ ಇಲ್ಲದೆ ಯಶಸ್ವಿಯಾಗಿ 300 ಕ್ಕಿಂತ ಹೆಚ್ಚು ಹೆರಿಗೆಯನ್ನು ಮಾಡಿದ್ದಾರೆ ಎಂದು ಸಚಿವರು ಹೇಳಿದರು.

ಮೈಸೂರು ವಿಭಾಗದಿಂದ ಮೈಸೂರು ಜಿಲ್ಲೆಯ ವಿಜಯನಗರ 3ನೇ ಹಂತದಲ್ಲಿ ವಾಸವಾಗಿರುವ ಪ್ರೋ. ಎಸ್. ಆರ್. ನಿರಂಜನ ಅವರು ಶಿಕ್ಷಣ ಕ್ಷೇತ್ರದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಸದರಿ ಸಾಧಕರು ವಿಜ್ಞಾನ ಕ್ಷೇತ್ರದಲ್ಲಿ ಅತ್ಯುತ್ತಮವಾದ ಸಂಶೋಧನೆಗಳನ್ನು ನಡೆಸಿ, ಹೆಚ್ಚಿನ ಸಂಶೋಧನಾ ಹಕ್ಕುಸ್ವಾಮ್ಯತೆಗಳನ್ನ ಹೊಂದಿದ್ದು, ಸದರಿಯವರಿಗೆ ಈಗಾಗಲೇ ಸರ್.ಸಿ.ವಿ.ರಾಮನ್ ರಾಜ್ಯ ಯುವ ವಿಜ್ಞಾನಿ ಪ್ರಶಸ್ತಿ, ಡಾ. ರಾಜಾರಾಮಣ್ಣ ಪ್ರಶಸ್ತಿ ಹಾಗೂ ಇನ್ನಿತರೆ ಅತ್ಯುತ್ತಮ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ ಎಂದು ನುಡಿದರು.

ಕಲಬುರ್ಗಿ ವಿಭಾಗದಿಂದ ಬಳ್ಳಾರಿ ಜಿಲ್ಲೆ ಕೂಡ್ಲಗಿ ತಾಲೂಕಿನ ಗುಡೆಕೋಟೆ ಹಾಲಸಾಗರ ಗ್ರಾಮದವರಾದ ಭಟ್ರಹಳ್ಳಿ ಗೂಳಪ್ಪ ಅವರು ಇತರೆ ಕ್ಷೇತ್ರದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಇವರು ಸಾಲು ಮರದ ತಿಮ್ಮಕ್ಕನಂತೆ ಸುಮಾರು 25 ವರ್ಷಗಳಿಂದ ಸುಮಾರು 75 ಎಕರೆ ಅರಣ್ಯ ಬೆಳೆಸಿದ್ದು, ಯಾವುದೇ ಫಲಾಪೇಕ್ಷೆ ಇಲ್ಲದೆ ಪರಿಸರ ಸಂರಕ್ಷಣೆ ಮಾಡಿ, ಅರಣ್ಯ ಇಲಾಖೆಯ ಪ್ರಶಂಸೆಗೆ ಪಾತ್ರರಾಗಿದ್ದಾರೆ ಎಂದು ಸಚಿವರು ತಿಳಿಸಿದರು.

ಬೆಂಗಳೂರು ಕೇಂದ್ರ ಸ್ಥಾನದಿಂದ ವೈ. ಅಶ್ವತ್ಥರಾಮಯ್ಯ ಸಮಾಜ ಸೇವೆ ಕ್ಷೇತ್ರದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಇವರು ಶ್ರೀ ವಾಲ್ಮೀಕಿ ಮಹರ್ಷಿ ಆಶ್ರಮ ಆದಿಗುರು ಪೀಠ ಹಾಗೂ ಬಸವನಗುಡಿಯ ಶ್ರೀ ಬೇಡರಕಣ್ಣಪ್ಪ ದೇವಸ್ಥಾನವನ್ನು 1979ರಲ್ಲಿ ಸ್ಥಾಪಿಸಿ ಅಭಿವೃದ್ದಿಗೊಳಿಸಿರುತ್ತಾರೆ. ವಾಲ್ಮೀಕಿ ಸಮಾಜದ ಬಡವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ಸಚಿವರು ನುಡಿದರು.

ವಿಜಯನಗರ ಜಿಲ್ಲೆಯ ಹೊಸಪೇಟೆ ನಗರದ ಜಂಬಯ್ಯ ನಾಯಕ ಅವರು ಸಮಾಜ ಸೇವೆ ಕ್ಷೇತ್ರದಲ್ಲಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಸದರಿ ಸಾಧಕರು ಶ್ರೀ ಮಹಷಿ ವಾಲ್ಮೀಕಿ ಗುರುಪೀಠ, ರಾಜನಹಳ್ಳಿ ಇದರ ಧರ್ಮದರ್ಶಿಗಳಾಗಿದ್ದು, ಪರಿಶಿಷ್ಟ ಪಂಗಡಗಳ ಜನಾಂಗದವರ ಶ್ರೇಯೋಭಿವೃದ್ಧಿಗಾಗಿ ಅಪಾರ ಸೇವೆಯನ್ನು ಸಲ್ಲಿಸಿದ್ದಾರೆ ಎಂದು ಸಚಿವರು ತಿಳಿಸಿದರು.